# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

**ಗುರುವಾರ, ದಿನಾಂಕ:6ನೇ ಜುಲೈ, 2023**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

**ಶ್ರೀ ಬಿ.ಎಂ. ಫಾರೂಖ್** (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು ಸರ್ಕಾರಿ ಭರವಸೆಗಳ ಸಮಿತಿಯ 49ನೇ ವರದಿಯನ್ನೊಪ್ಪಿಸುವುದು.

## 03. ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಶ್ರೀ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:-**

"ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:21.03.2023 ರಿಂದ 06 ತಿಂಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

## 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2023ನೇ ಜುಲೈ, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:05.07.2023ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿದ ಪ್ರಸ್ತಾವದ ಮೇಲೆ ಚರ್ಚೆ:

**ಎರಡನೇ ದಿನ**

## 05. ಗಮನ ಸೆಳೆಯುವ ಸೂಚನೆಗಳು

01. **ಡಾ॥ ವೈ.ಎ. ನಾರಾಯಣಸ್ವಾಮಿ, ಶ್ರೀ ಎಸ್.ವ್ಹಿ. ಸಂಕನೂರ ಹಾಗೂ ಶ್ರೀ ಮರಿತಿಬ್ಬೇಗೌಡ** ಅವರುಗಳು ದಿನಾಂಕ:01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೇ ಪಿಂಚಣಿ ಯೋಜನೆಯನ್ನು ಮುಂದುವರೆಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀಯುತರುಗಳಾದ ಬಿ.ಎಂ. ಫಾರೂಖ್, ಕೆ.ಎ. ತಿಪ್ಪೇಸ್ವಾಮಿ ಹಾಗೂ ಶರವಣ ಟಿ.ಎ.** ಅವರುಗಳು ಬೆಂಗಳೂರು ನಗರದ ಸುತ್ತಲೂ ಹೊರ ವರ್ತುಲ ರಸ್ತೆಯನ್ನು ನಿರ್ಮಿಸುವ ಯೋಜನೆಯ ಕಾಮಗಾರಿಯನ್ನು ತುರ್ತಾಗಿ ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಮಂಜುನಾಥ ಭಂಡಾರಿ** ಅವರು ಇತ್ತೀಚೆಗೆ ಕರ್ನಾಟಕದಲ್ಲಿ ಗರ್ಭಿಣಿ ಸ್ತ್ರೀಯರು ಪ್ರಸವ ಸಂದರ್ಭದಲ್ಲಿ ಅತಿ ಹೆಚ್ಚು ಮರಣ ಪ್ರಮಾಣ ದಾಖಲಾಗಿದ್ದು, ಮಹಿಳೆ ಹಾಗೂ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಇರುವ ಯೋಜನೆಗಳ ಅನುಷ್ಠಾನದಲ್ಲಿರುವ ತೊಡಕುಗಳು ಹಾಗೂ ಪ್ರಾದೇಶಿಕ ಭಿನ್ನತೆಗಳ ಕುರಿತು ಪ್ರಸ್ತಾಪಿಸುವುದು.

..3..

೦೨. **ಶ್ರೀ ಮರಿತಿಬ್ಬೇಗೌಡ** ಅವರು ಸಮಾಜ ಕಲ್ಯಾಣ ಇಲಾಖೆಯಡಿ ಕ್ರೈಸ್ಟ್ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿ.ಆರ್.ಜಿ., ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ, ಆರೋಗ್ಯ ಸೌಲಭ್ಯ ವಿಸ್ತರಣೆ ಹಾಗೂ ವಸತಿ ಶಾಲೆಗಳ ಉನ್ನತೀಕರಣ ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀ ಸಿ.ಎನ್. ಮಂಜೇಗೌಡ** ಅವರು 2023-24ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ ಮಕ್ಕಳ ಸಮವಸ್ತ್ರ ಮತ್ತು ಪಠ್ಯ ಪುಸ್ತಕಗಳನ್ನು ವಿತರಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**